# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 635 |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | 11.12.2023 |
| **ಉತ್ತರಿಸುವ ಸಚಿವರು** | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| **ಅ)** | ನರ್ಸಿಂಗ್ ಕೋರ್ಸ್‌ನ ಪ್ರವೇಶ ಪ್ರಕ್ರಿಯೆಯಲ್ಲಿ ರಾಜ್ಯ ಶುಶ್ರೂತಾ ಪರೀಕ್ಷಾ ಮಂಡಳಿಯು ನಕಲಿ ವಿದ್ಯಾರ್ಥಿಗಳನ್ನು ಸೃಷ್ಟಿಸಿದ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು: (ಸಂಪೂರ್ಣ ಮಾಹಿತಿ ನೀಡುವುದು) | ನರ್ಸಿಂಗ್ ಕೋರ್ಸ್ ಪ್ರವೇಶ ಪ್ರಕ್ರಿಯೆಯಲ್ಲಿ ರಾಜ್ಯ ಶುಶ್ರೂಷ ಪರೀಕ್ಷಾ ಮಂಡಳಿಯು ನಕಲಿ ವಿದ್ಯಾರ್ಥಿಗಳನ್ನು ಸೃಷ್ಟಿಸಿದ ಪ್ರಕರಣವು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಈ ಪ್ರಕರಣದ ಕುರಿತು ಅನಾಮಧೇಯ ದೂರು ಸ್ವೀಕೃತವಾಗಿರುತ್ತದೆ ಹಾಗೂ ಈ ವಿಷಯದ ಬಗ್ಗೆ ಪ್ರಜಾವಾಣಿ ಪತ್ರಿಕೆಯಲ್ಲಿ ಮಾಹಿತಿ ಪ್ರಕಟವಾಗಿರುತ್ತದೆ. ಇದರ ಆಧಾರದ ಮೇಲೆ ಸಂಬಂಧಪಟ್ಟ ಶಾಲೆಗಳಿಗೆ ಸೂಚನೆ ನೀಡಿ ವಿವರ ಕೇಳಲಾಗಿ, ಶಾಲೆಗಳ ಮುಖ್ಯಸ್ಥರು ವಿದ್ಯಾರ್ಥಿಗಳ ನೋಂದಣಿಯ ಮಾಹಿತಿಯು ತಾಂತ್ರಿಕ ಮತ್ತು ಲಿಪಿಕ ಕಾರಣಗಳಿಂದ ತಪ್ಪುಗಳು ಆಗಿದ್ದು, ಇವುಗಳನ್ನು ಸರಿಪಡಿಸಿ ಕೊಡುವಂತೆ ನೋಂದಣಿಗೆ ನಿಗಧಿಪಡಿಸಿದ ದಿನಾಂಕ:31.12.2022ರ ನಂತರ ಕೋರಿದ್ದು, ಮಂಡಳಿಯ ಹಿಂದಿನ ಕಾರ್ಯದರ್ಶಿಗಳು, ಕಾರ್ಯಕಾರಿ ನಿರ್ದೇಶಕರಿಂದಾಗಲಿ ಅಥವಾ ಸರ್ಕಾರದಿಂದಾಗಲಿ ಅನುಮತಿ ಪಡೆಯದೇ ವಿದ್ಯಾರ್ಥಿಗಳ ನೋಂದಣಿಯನ್ನು ಮಂಡಳಿಯ ಪೋರ್ಟಲ್‌ನಲ್ಲಿ Update ಮಾಡಲು ಸಹಿ ಮಾಡಿರುತ್ತಾರೆ.<br><br>ಈ ಸಂಬಂಧ ಮಂಡಳಿಯ ಹಿಂದಿನ ಕಾರ್ಯದರ್ಶಿಯವರ ವಿರುದ್ಧ ನಿಯಾಮಾನುಸಾರ ಶಿಸ್ತು ಕ್ರಮ ತೆಗೆದುಕೊಳ್ಳಲು ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರಿಗೆ ಸೂಚಿಸಲಾಗಿದೆ.<br><br>ಈ ರೀತಿಯ ಅಕ್ರಮಗಳು ನಡೆಯದಂತೆ ಪ್ರಸ್ತುತ ಉಪಯೋಗಿಸುತ್ತಿರುವ ತಂತ್ರಾಂಶವನ್ನು Tamper Proof ಆಗಿ ಬದಲಾಯಿಸುವ ಕ್ರಮ ಚಾಲನೆಯಲ್ಲಿದೆ. |
| **ಆ)** | ಪ್ರವೇಶ ಪ್ರಕ್ರಿಯೆ ಮುಗಿದ ಬಳಿಕ ನಕಲಿಯಾಗಿ ಸೃಷ್ಟಿಯಾದ ಅಭ್ಯರ್ಥಿಗಳ ಹೆಸರಿನಲ್ಲಿ ಅಕ್ರಮವಾಗಿ ಅಸಲಿ ಅಭ್ಯರ್ಥಿಗಳ ಹೆಸರನ್ನು ನೋಂದಾವಣಿ ಮಾಡಿ ಅಕ್ರಮ ಎಸಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು: | |
| **ಇ)** | ನಕಲಿ ಹೆಸರಿನಲ್ಲಿ ಅಭ್ಯರ್ಥಿಗಳನ್ನು ಸೃಷ್ಟಿಸಿ ನಂತರ ಹೆಸರು ಬದಲಾವಣೆ ಮಾಡಿ ಅಕ್ರಮ ಎಸಗುತ್ತಿರುವುದರಿಂದ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಂಚಿಸಿದಂತೆ ಆಗುವುದಿಲ್ಲವೇ; ನೊಂದಣಿ ಅವಧಿ ಮುಗಿದರೂ ಕೂಡ ಹೆಸರು ಬದಲಿಸುವ ಅಕ್ರಮ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| **ಈ)** | ಅಕ್ರಮ ಎಸಗಿರುವವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು: ಮುಂದೆ ಈ ರೀತಿಯ ಅಕ್ರಮಗಳು ನಡೆಯದಂತೆ ಮಂಡಳಿ ರೂಪಿಸಿದ ನಿಯಮಗಳು ಮತ್ತು ಮುನ್ನೆಚ್ಚರಿಕೆ ಕ್ರಮಗಳೇನು? | |

**ಸಂಖ್ಯೆ:** ಎಂಇಡಿ 574 ಎಂಎಸ್‌ಎಫ್ 2023

**(ಡಾ|| ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು,
ಜೀವನೋಪಾಯ ಸಚಿವರು